**ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಲಯ ಮಾಗಡಿ**

## ಕ್ರಿಮಿನಲ್ ಪ್ರಕರಣ ಸಂಖ್ಯೆ: 553/2021

ಪಿರ್ಯಾದುದಾರರು : ಕುದೂರು ಪೋಲಿಸು ಠಾಣೆ

**ವಿರುದ್ಧ**

**ಆರೋಪಿ : ಕುಮರೇಶ್**

**ಚಾಸಾ:03**/ಪ್ರಾಸಾ:03

| | |
|---|---|
| ಹೆಸರು | **ರಾಮ @ ನಂಜುಂಡಪ್ಪ** |
| ತಂದೆಯ ಹೆಸರು | **ರಾಮಣ್ಣ** |
| ವಯಸ್ಸು | **26** |
| ಉದ್ಯೋಗ | **ವ್ಯವಸಾಯ** |
| ವಿಳಾಸ | **ರಾಜಗಿರಿ** |

**ದಿನಾಂಕಃ 13-10-2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:-ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ,ಪೋಲಿಸರು ನಮ್ಮಗಳ ಸಮಕ್ಷಮ ಯಾವುದೇ ಮಹಜರ್ ಕ್ರಮ ಅನುಸರಿಸಿರುವುದಿಲ್ಲ, ಯಾವುದೇ ವಾಹನಗಳನ್ನು ಅಮಾನತು ಪಡಿಸಿಕೊಂಡಿರುವುದಿಲ್ಲ, ಇದನ್ನು ಹೊರತು ಪಡಿಸಿ ಪ್ರಕರಣದ ಬಗ್ಗೆ ನನಗೇನೂ ಮಾಹಿತಿ ಇಲ್ಲ.

ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಸ್ಥಳ ಮಹಜರ್ ಆಗಿದ್ದು, ಸ್ಥಳ ಮಹಜರ್ ನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಏನು ಬರೆದಿರುತ್ತದೆಂದು ನನಗೆ ಗೊತ್ತಿರುವುದಿಲ್ಲ. ನಿಪಿ-1 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ಸಹಿಯನ್ನು ಮಾಡಿರುತ್ತೇನೆ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ,** ಪಾಟೀ **ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ,** ಪಾಟೀ **ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿನಾಂಕಃ 14.08.2020 ರಂದು ಪೋಲಿಸರು ದೂರಿನ ಆಧಾರದ ಮೇಲೆ ಅಪಘಾತದ ಸ್ಥಳಕ್ಕೆ ಭೇಟಿ ನೀಡಿದ್ದು, ಸದರಿ ಸ್ಥಳವನ್ನು ಚಾಸಾ-1ರವರು ತೋರಿಸಿದ್ದು, ಪೋಲಿಸರು ಚಾಸಾ-1ರವರು ತೋರಿಸಿದ ಜಾಗದಲ್ಲಿ ಮಧ್ಯಾಹ್ನ 12.00 ರಿಂದ 01.00 ರವರೆಗೆ ನನ್ನ, ಚಾಸಾ-1 ಮತ್ತು 2 ರವರ ಸಮಕ್ಷಮ ಸ್ಥಳ ಪಂಚನಾಮೆ ಜರುಗಿಸಿ, ಪಂಚನಾಮೆ ಕಾಲಕ್ಕೆ ಪೋಲಿಸರು ನಮ್ಮಗಳ ಸಮಕ್ಷಮ ಕೆಎ-02-ಹೆಚ್ ಎಂ-5409 ಹಾಗೂ ಕೆಎ-01-ಎಂಕೆ-2454 ವಾಹನಗಳನ್ನು ಮುಂದಿನ ತನಿಖೆಗಾಗಿ ಅಮಾನತು ಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ.

ನಿಪಿ-1ರಲ್ಲಿರುವ ಎಲ್ಲಾ ಅಂಶಗಳು ನನಗೆ ಗೊತ್ತಿದ್ದರೂ ಸಹ ಆರೋಪಿತರುಗಳೊಂದಿಗೆ ರಾಜೀ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ **ಸವಾಲು :- ಶ್ರೀ. ಎಸ್.ಎಸ್.ಬಿ.** ವಕೀಲರಿಂದ **ಆರೋಪಿಗಳ** ಪರವಾಗಿ:-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಅ.ನ್ಯಾ.ದಂ. ಮತ್ತು ಜೆ.ಎಂ.ಎಫ್.ಸಿ. ಮಾಗಡಿ.**